ಕ್ರ. ಸಂ. 40.

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಹೇಳಿಕೆ:**

**ಸೂಚನೆ:-**

ದಿನಾಂಕ:20-02-2023 ರಂದು ಪ್ರಜಾವಾಣಿ ಮತ್ತು ಹೊಸದಿಗಂತ ದಿನಪತ್ರಿಕೆಗಳಲ್ಲಿ ವರದಿಯಾಗಿರುವಂತೆ ಒಳಮೀಸಲಿಗೆ ಸಹಮತ ಎಂಬ ಶೀರ್ಷಿಕೆಯಡಿ ವರದಿಯಾಗಿದ್ದು, ಆದಷ್ಟು ಶೀಘ್ರ ಬೇಡಿಕೆ ಈಡೇರಿಸಲಾಗುವುದು ಎಂದು ಮಾನ್ಯ ಸಮಾಜ ಕಲ್ಯಾಣ ಸಚಿವರು ಹೇಳಿಕೆ ಕೊಟ್ಟಿರುತ್ತಾರೆ.

ಸದರಿ ವಿಷಯದನ್ವಯ ರಾಜ್ಯಾದ್ಯಂತ ಸುಮಾರು 60 ಕ್ಕಿಂತ ಹೆಚ್ಚು ದಿನಗಳಿಂದ ನಿರಂತರವಾಗಿ ಪರಿಶಿಷ್ಟ ಸಮುದಾಯಗಳ ಜನರು ಹಾಗೂ ವಿವಿಧ ಸಂಘಟನೆಗಳು ಸೇರಿ ಒಳಮೀಸಲಾತಿ ಜಾರಿಗಾಗಿ ತೀವ್ರವಾಗಿ ಪ್ರತಿಭಟನೆಗಳನ್ನು ಮಾಡುತ್ತಿರುತ್ತಾರೆ ಮತ್ತು ಅಹೋರಾತ್ರಿ ಧರಣಿ ಕೈಗೊಂಡಿರುವುದು ಕೂಡಾ ಹಲವು ಪತ್ರಿಕೆಗಳಲ್ಲಿ ವರದಿಯಾಗಿರುತ್ತದೆ. ಸದ್ಯ ಈಗಲೂ ಕೂಡಾ ಪರಿಶಿಷ್ಟ ಸಮುದಾಯಗಳ ಜನರು ಹಾಗೂ ಸಂಘಟನೆಗಳು ಧರಣಿ ಸ್ಥಳದಲ್ಲಿ ಕೂತು ಪ್ರತಿಭಟನೆಯನ್ನು ನಡೆಸುತ್ತಿದ್ದಾರೆ. ನಾವು ರಾಜ್ಯದ ವಿವಿಧ ಸ್ಥಳಗಳಿಗೆ ಭೇಟಿ ನೀಡುವ ಸಮಯದಲ್ಲಿ ಸಾರ್ವಜನಿಕರು ಒಳಮೀಸಲಾತಿ ಜಾರಿಗಾಗಿ ನಮಗೆ ಒತ್ತಾಯಿಸುವುದು, ಧರಣಿ ಮಾಡುವುದು ಹಾಗೂ ಇನ್ನಿತರ ಘಟನೆಗಳು ಜರುಗುತ್ತಿರುತ್ತವೆ. ಈ ವಿಷಯದಲ್ಲಿ ಪರ-ವಿರೋಧಗಳು ಉಂಟಾಗಿ ನಮ್ಮ-ನಮ್ಮಲ್ಲೇ ಒಳ ಜಗಳ ಉಂಟಾಗುತ್ತಿದೆ. ಆದ್ದರಿಂದ ಒಳಮೀಸಲಾತಿ ಜಾರಿ ವಿಷಯಕ್ಕೆ ಒಂದು ತಾರ್ಕಿಕ ಅಂತ್ಯ ಕಾಣಿಸುವ ಅವಶ್ಯಕತೆ ಇದೆ. ಆದ್ದರಿಂದ ಒಳ ಮೀಸಲಾತಿ ಜಾರಿಯ ಬಗ್ಗೆ ಸರ್ಕಾರವು ತನ್ನ ನಿಲುವನ್ನು ರಾಜ್ಯದ ಜನತೆಯ ಮುಂದೆ ಸ್ಪಷ್ಟಪಡಿಸಬೇಕೆಂದು ಮಾನ್ಯ ಸಮಾಜ ಕಲ್ಯಾಣ ಮಂತ್ರಿಯವರಲ್ಲಿ ಶೂನ್ಯ ವೇಳೆಯಲ್ಲಿ ಒತ್ತಾಯಿಸುತ್ತೇನೆ.

**ಉತ್ತರ**

ಪರಿಶಿಷ್ಟ ಜಾತಿಗಳ ವರ್ಗೀಕರಣದ (ಒಳಮೀಸಲಾತಿ) ಕುರಿತು ಪರಿಶೀಲಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಮತ್ತು ಸಣ್ಣ ನೀರಾವರಿ ಸಚಿವರ ಅಧ್ಯಕ್ಷತೆಯಲ್ಲಿ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಸಂಶಾ 5 ಸಿಎಸ್‌ಸಿ

2022 ದಿನಾಂಕ:13-12-2022 ರಲ್ಲಿ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಲಾಗಿದೆ. ಸಚಿವ ಸಂಪುಟದ ಉಪ ಸಮಿತಿಯು ಸದರಿ ವಿಷಯವನ್ನು ಪರಿಶೀಲಿಸುತ್ತಿದೆ.

**(ಕೋಟ ಶ್ರೀನಿವಾಸ ಪೂಜಾರಿ)**
**ಸಮಾಜ ಕಲ್ಯಾಣ ಹಾಗೂ**
**ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು**

**ಸಕಇ 109 ಎಸ್‌ಎಲ್‌ಪಿ 2023**